# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಗೂಲಿ ನೌಕರರಿಗೆ ವೇತನ, ರಜೆ ಮತ್ತು ಇತರ ಸೇವಾ ಸೌಲಭ್ಯಗಳನ್ನು ಒದಗಿಸುವ ಬಗ್ಗೆ.

ಓದಲಾಗಿದೆ :

1. ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 77 ಶಾಸನ 2012, ದಿನಾಂಕ: 15.2.2013.
2. ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇಸ್ಥಅ 2013, ದಿನಾಂಕ: 10.5.2013.
3. ಅಧಿಸೂಚನೆ ಸಂಖ್ಯೆ: ಸಿಆಸುಇ 44 ಸೇಸ್ಥಅ 2013, ದಿನಾಂಕ: 22.2.2014.

ಪ್ರಸ್ತಾವನೆ :

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿಗೆ ಮತ್ತು ಸೇವಾವಧಿಯ ಕನಿಷ್ಠ ಭದ್ರತೆ, ಉತ್ತಮ ವೇತನ ಹಾಗೂ ಕೆಲವು ಸಾಮಾಜಿಕ ಭದ್ರತೆಯನ್ನು ಕಲ್ಪಿಸಲು ಮೇಲೆ (1)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ನ್ನು ಹೊರಡಿಸಲಾಗಿದೆ. ಸದರಿ ಅಧಿನಿಯಮವನ್ನು ಅನುಷ್ಠಾನಗೊಳಿಸುವ ಸಂಬಂಧ ಮೇಲೆ (2)ರಲ್ಲಿ ಓದಲಾದ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ. ಮೇಲ್ಕಂಡ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಮೇಲೆ (3)ರಲ್ಲಿ ಓದಲಾದ ಅಧಿಸೂಚನೆಯನ್ವಯ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು, 2013ನ್ನು ಹೊರಡಿಸಲಾಗಿದೆ.

ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ರ ಸೆಕ್ಷನ್ 3(2)ನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು, 2013ರ ನಿಯಮ 3ರೊಡನೆ ಓದಿಕೊಂಡಂತೆ, ಇವುಗಳನ್ವಯ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿನ ಸಂಬಂಧಿಸಿದ ಆಡಳಿತ ಇಲಾಖೆಗಳು ಹೊರಡಿಸಿರುವ ಅಧಿಸೂಚನೆಯಲ್ಲಿ ನಮೂದಿಸಿರುವ ಅರ್ಹ ದಿನಗೂಲಿ ನೌಕರರಿಗೆ ವೇತನ, ರಜೆ ಮತ್ತು ಇತರ ಸೌಲಭ್ಯಗಳನ್ನು ವಿಸ್ತರಿಸುವ ಕುರಿತು ಸರಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 24 ಸೇಸ್ಥಅ 2014,**
**ಬೆಂಗಳೂರು, ದಿನಾಂಕ: 19.09.2014.**

1. ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ರ ಸೆಕ್ಷನ್ 3ರ ಅವಕಾಶದಂತೆ, ಸೇವಾ ಮುಂದುವರಿಕೆಗೆ ಅರ್ಹರಾದ ದಿನಗೂಲಿ ನೌಕರರನ್ನು ಕರ್ನಾಟಕ ಸರ್ಕಾರದ ಸಚಿವಾಲಯದ ಸಂಬಂಧಿತ ಆಡಳಿತ ಇಲಾಖೆಗಳು ಅಧಿಸೂಚಿಸಿದ ದಿನಾಂಕದಿಂದ ಅವರನ್ನು ಸೇವೆಯಲ್ಲಿ ಮುಂದುವರೆಸಿದ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನವನ್ನು ನೀಡತಕ್ಕದ್ದು.

...2

2. ರಾಜ್ಯ ಸರ್ಕಾರಿ ನೌಕರರಿಗೆ ಕಾಲಕಾಲಕ್ಕೆ ನೀಡಲಾಗುವ ತುಟ್ಟಿಭತ್ಯೆಯ ಶೇ. 75ರಷ್ಟನ್ನು ಅರ್ಹ ದಿನಗೂಲಿ ನೌಕರರಿಗೆ. ಅವರನ್ನು ಮುಂದುವರೆಸುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ತುಟ್ಟಿಭತ್ಯೆಯಾಗಿ ಮಂಜೂರು ಮಾಡತಕ್ಕದ್ದು.
3. ರಾಜ್ಯ ಸರ್ಕಾರಿ ನೌಕರರಿಗೆ ಕಾಲಕಾಲಕ್ಕೆ ನೀಡಲಾಗುವ, ಅವರುಗಳು ಕರ್ತವ್ಯ ನಿರ್ವಹಿಸುವ ಸ್ಥಳಕ್ಕೆ ಅನ್ವಯವಾಗುವ ಮನೆ ಬಾಡಿಗೆ ಭತ್ಯೆಯ ಸಾಮಾನ್ಯ ದರಗಳ ಶೇ. 75ರಷ್ಟನ್ನು ಅರ್ಹ ದಿನಗೂಲಿ ನೌಕರರಿಗೆ, ಅವರನ್ನು ಮುಂದುವರೆಸುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ಮನೆ ಬಾಡಿಗೆ ಭತ್ಯೆಯಾಗಿ ಮಂಜೂರು ಮಾಡತಕ್ಕದ್ದು.
4. ಅರ್ಹ ದಿನಗೂಲಿ ನೌಕರರು ವರ್ಷದ ಎಲ್ಲಾ ಸಾರ್ವತ್ರಿಕ ರಜೆಗಳಿಗೆ ಅರ್ಹರಾಗಿರುತ್ತಾರೆ.
5. ಅರ್ಹ ದಿನಗೂಲಿ ನೌಕರರು ವರ್ಷಕ್ಕೆ 15 ದಿನಗಳ ಸಾಂದರ್ಭಿಕ ರಜೆಗಳಿಗೆ ಅರ್ಹರಾಗಿರುತ್ತಾರೆ.
6. ಅರ್ಹ ದಿನಗೂಲಿ ನೌಕರರು ವರ್ಷಕ್ಕೆ 30 ದಿನಗಳ ಗಳಿಕೆ ರಜೆಗೆ ಅರ್ಹರಾಗಿರುತ್ತಾರೆ.
7. ಮಹಿಳಾ ದಿನಗೂಲಿ ನೌಕರರು 180 ದಿನಗಳ ಪ್ರಸೂತಿ ರಜೆಗೆ ಅರ್ಹರಾಗಿರುತ್ತಾರೆ.
8. ಪುರುಷ ದಿನಗೂಲಿ ನೌಕರರು 15 ದಿನಗಳ ಪೆಟರ್ನಿಟಿ ರಜೆಗೆ ಅರ್ಹರಾಗಿರುತ್ತಾರೆ.
9. ದಿನಗೂಲಿ ನೌಕರರಿಗೆ 60 ವರ್ಷಗಳ ವಯಸ್ಸಾದ ತರುವಾಯ, ಪೂರ್ಣಗೊಳಿಸಿದ ಸೇವೆಯ ಪ್ರತಿಯೊಂದು ವರ್ಷಕ್ಕೆ 15 ದಿನಗಳ ವೇತನದಂತೆ ಗರಿಷ್ಠ 12 ತಿಂಗಳುಗಳ ವೇತನಕ್ಕೆ ಮಿತಿಗೊಳಿಸಿದ ಎಕ್ಸ್‌ಗ್ರೇಷಿಯವನ್ನು(ಅನುಗ್ರಹ ಪೂರ್ವಕ) ಅವರಿಗೆ ನೀಡತಕ್ಕದ್ದು.
10. ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ರ ಸೆಕ್ಷನ್-3(2) ಹಾಗೂ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು, 2013ರ ನಿಯಮ 3 ಮತ್ತು ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೇಸ್ಥಅ 2013 ದಿನಾಂಕ: 10.05.2013ರನ್ವಯ ಕರ್ನಾಟಕ ಸರ್ಕಾರದ ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಗಳು ಹೊರಡಿಸಿರುವ ಅಧಿಸೂಚನೆಯಲ್ಲಿ ನಮೂದಿಸಿರುವ ಅರ್ಹ ದಿನಗೂಲಿ ನೌಕರರಿಗೆ ಮಾತ್ರ ಈ ಆದೇಶದಲ್ಲಿನ ಸೌಲಭ್ಯಗಳನ್ನು ವಿಸ್ತರಿಸತಕ್ಕದ್ದು.
11. ಈ ಆದೇಶದಲ್ಲಿ ಮಂಜೂರು ಮಾಡಿರುವ ಸೌಲಭ್ಯಗಳು, ಕರ್ನಾಟಕ ಸರ್ಕಾರದ ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಯು ಅರ್ಹ ದಿನಗೂಲಿ ನೌಕರರ ಹೆಸರನ್ನು ಅಧಿಸೂಚಿಸಿ ಹೊರಡಿಸಿದ ದಿನಾಂಕದಿಂದ ಮಾತ್ರ ಅವರಿಗೆ ಲಭ್ಯವಾಗತಕ್ಕದ್ದು.
12. ಅರ್ಹ ದಿನಗೂಲಿ ನೌಕರರಿಗೆ, ಈ ಆದೇಶದನ್ವಯ ನೀಡಲಾಗುವ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನ, ತುಟ್ಟಿಭತ್ಯೆ, ಮನೆಬಾಡಿಗೆ ಭತ್ಯೆ ಮತ್ತು ಎಕ್ಸ್‌ಗ್ರೇಷಿಯ(ಅನುಗ್ರಹ ಪೂರ್ವಕ)ಗಳನ್ನು ಹೊರತುಪಡಿಸಿ ಇತರ ಯಾವುದೇ ಆರ್ಥಿಕ ಸೌಲಭ್ಯವನ್ನು ನೀಡತಕ್ಕದ್ದಲ್ಲ.

...3

13. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 187 ಸೇ-1/14, ದಿನಾಂಕ: 01.09.2014ರಲ್ಲಿ ಮತ್ತು ಆಇ 735 ಸೇ-1/14, ದಿನಾಂಕ: 17.09.2014ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
(ಡಾ|| ಮಂಜುನಾಥ ಜಿ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಗೆ:

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ಬೆಂಗಳೂರು ಇವರಿಗೆ ಇದನ್ನು ಕರ್ನಾಟಕ ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು ಪ್ರಕಟಿತ 1000 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-1) ವಿಧಾನಸೌಧ, ಬೆಂಗಳೂರು ಇವರಿಗೆ ಒದಗಿಸುವಂತೆ ಕೋರಿದೆ.

<u>ಪ್ರತಿಗಳು:</u>

1. ಮಹಾಲೇಖಪಾಲರು, ಕರ್ನಾಟಕ, (ಅಕೌಂಟ್ಸ್/ಆಡಿಟ್)ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ -110 021.
8. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
9. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
10. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
11. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು

...4